**ಕರ್ನಾಟಕ ಸರ್ಕಾರ**

**ಆಯುಕ್ತರ ಕಛೇರಿ. ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-1**

ಸಂಖ್ಯೆ:ಸಿ4(6) ಶೈ ಮತ್ತು ರಜೆ.ಅ ನಿಗದಿ-35/2020-21 ದಿನಾಂಕ:15.05.2021

: ಸುತ್ತೋಲೆ :

ವಿಷಯ: 2020-21ನೇ ಸಾಲಿನ 1 ರಿಂದ 9ನೇ ತರಗತಿಗಳ ವಿದ್ಯಾರ್ಥಿಗಳ ಮೌಲ್ಯಾಂಕನ ವಿಶ್ಲೇಷಣೆ ಮಾಡಿ ಫಲಿತಾಂಶವನ್ನು SATS ನಲ್ಲಿ ದಾಖಲಿಸುವ ಕುರಿತು.

ಉಲ್ಲೇಖ:
1. ಈ ಕಛೇರಿಯ ಸುತ್ತೋಲೆ ಸಮ ಸಂಖ್ಯೆ ದಿ:20/04/2021.
2. ಈ ಕಛೇರಿಯ ಸುತ್ತೋಲೆ ಸಮ ಸಂಖ್ಯೆ ದಿ:21/04/2021.
3. ಈ ಕಛೇರಿಯ ಸುತ್ತೋಲೆ ಸಮ ಸಂಖ್ಯೆ ದಿ:04/05/2021.
4. ದಿನಾಂಕ: 13/05/2021 ರಂದು ವೆಬಿನಾರ್ ಮೂಲಕ ನಡೆಸಿದ ಪ್ರಗತಿ ಪರಿಶೀಲನೆ.
5. ಮಾನ್ಯ ಶಿಕ್ಷಣ ಸಚಿವರಿಗೆ ಜನಪ್ರತಿನಿಧಿಗಳು ಮತ್ತು ವಿವಿಧ ಶಿಕ್ಷಕ ಸಂಘದ ಪ್ರತಿನಿಧಿಗಳು ಸಲ್ಲಿಸಿದ ಮನವಿಗಳು.

*****

ಮೇಲ್ಕಾಣಿಸಿದ ವಿಷಯದಂತೆ ಉಲ್ಲೇಖ 1 ಮತ್ತು 2 ರಲ್ಲಿ ಕರ್ನಾಟಕ ರಾಜ್ಯ ಪಠ್ಯಕ್ರಮ ಅನುಸರಿಸುವ ಶಾಲೆಗಳಲ್ಲಿ 1 ರಿಂದ 9ನೇ ತರಗತಿ ವಿದ್ಯಾರ್ಥಿಗಳಿಗೆ ಅಲ್ಲಿಯವರೆಗೂ ಪೂರೈಸಿದ ಶೈಕ್ಷಣಿಕ ಚಟುವಟಿಕೆಗಳನ್ನು ಆಧರಿಸಿ ಶಾಲಾ ಹಂತದಲ್ಲಿ ದಿನಾಂಕ:26/04/2021ರೊಳಗೆ ಮೌಲ್ಯಾಂಕನ ನಿರ್ವಹಿಸಿ ಫಲಿತಾಂಶ ದಾಖಲಿಸಿ ಪೂರ್ಣಗೊಳಿಸಲು ಸೂಚಿಸಲಾಗಿತ್ತು.

ಸದರಿ ಕಾರ್ಯದ ಪ್ರಗತಿ ಪರೀಶೀಲನೆಯನ್ನು ಉಲ್ಲೇಖ 4 ರಂತೆ ದಿನಾಂಕ 13-05-2021 ರಂದು ಉಪನಿರ್ದೇಶಕರು (ಅಡಳಿತ) ಮತ್ತು (ಅಭಿವೃದ್ಧಿ) ಇವರೊಡನೆ ನಡೆಸಿದ ವೆಬಿನಾರ್ ಮೂಲಕ ಪರಿಶೀಲಿಸಿದಾಗ ಸದರಿ ಮೌಲ್ಯಾಂಕನ ಮಾಡಿ SATS ತಂತ್ರಾಂಶದಲ್ಲಿ ದಾಖಲಿಸಿರುವ ಪ್ರಗತಿಯು ಸರಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳಲ್ಲಿ ಸಂಪೂರ್ಣಗೊಳ್ಳದೇ ಬಾಕಿ ಇರುವುದು ಕಂಡುಬಂದಿತು. ಸದರಿ ಮೌಲ್ಯಾಂಕನ ವಿಶ್ಲೇಷಣೆಯ ಆಧಾರದ ಮೇಲೆ ಬರುವ ಶೈಕ್ಷಣಿಕ ಸಾಲಿನಲ್ಲಿ ವಿದ್ಯಾರ್ಥಿಗಳಿಗೆ ಸೇತು ಬಂಧ ಕಾರ್ಯಕ್ರಮವನ್ನು ಆಯೋಜಿಸಬೇಕಾಗಿರುವುದರಿಂದ ಸದರಿ ಕಾರ್ಯವನ್ನು ಆನ್-ಲೈನ್ ಮೂಲಕ ತ್ವರಿತವಾಗಿ ದಿ: 18-05-2021 ಪೂರ್ಣಗೊಳಿಸಲು ತಿಳಿಸಲಾಗಿತ್ತು.

ಉಲ್ಲೇಖ 5 ರಲ್ಲಿ ಸ್ವೀಕೃತವಾದ ಮನವಿಗಳನ್ನು ಆಧರಿಸಿ ಸದರಿ ಕಾರ್ಯವನ್ನು ರಾಜ್ಯದಲ್ಲಿ ಪ್ರಸ್ತುತ ಜಾರಿಯಲ್ಲಿರುವ ಲಾಕ್ ಡೌನ್ ಮುಗಿದ 3 ದಿನಗಳೊಳಗಾಗಿ ಪೂರ್ಣಗೊಳಿಸಲು ತಿಳಿಸಿದೆ.

**(ಮಾನ್ಯ ಆಯುಕ್ತರ ಆದೇಶದ ಮೇರೆಗೆ)**

**ನಿರ್ದೇಶಕರು (ಪ್ರೌಢ ಶಿಕ್ಷಣ)**
**ಸಾರ್ವಜನಿಕ ಶಿಕ್ಷಣ ಇಲಾಖೆ,**
**ಬೆಂಗಳೂರು.**

**ಇವರಿಗೆ:-**

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ ಮತ್ತು ಅಭಿವೃದ್ಧಿ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಉಪನಿರ್ದೇಶಕರು (ಆಡಳಿತ ಮತ್ತು ಅಭಿವೃದ್ಧಿ) ರವರ ಮೂಲಕ ಮುಂದಿನ ಕ್ರಮಕ್ಕಾಗಿ,

**ಪ್ರತಿಯನ್ನು ಗೌರವಗಳೊಂದಿಗೆ:-**

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು ಎಸ್.ಎಸ್.ಎ/ಆರ್.ಎಂ.ಎಸ್.ಎ ನೃಪತುಂಗ ರಸ್ತೆ, ಬೆಂಗಳೂರು ರವರಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ
5. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು ರವರಿಗೆ ಮಾಹಿತಿಗಾಗಿ
6. ಆಯುಕ್ತರು ಸಮಾಜ ಕಲ್ಯಾಣ ಇಲಾಖೆ ಬೆಂಗಳೂರು ರವರಿಗೆ ಮಾಹಿತಿಗಾಗಿ
7. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
8. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
9. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
10. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ / ಕಲಬುರಗಿ ರವರಿಗೆ ಸೂಕ್ತ ಕ್ರಮಕ್ಕಾಗಿ
11. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ
12. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನೋಡಲ್ ಅಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ.
13. ಸಹ ನಿರ್ದೇಶಕರು ಮಧ್ಯಾಹ್ನ ಉಪಹಾರ ಯೋಜನೆ ಬೆಂಗಳೂರು ರವರಿಗೆ. ಮಾಹಿತಿಗಾಗಿ.
14. ಕಛೇರಿ ಪ್ರತಿ